ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರಿಗೆ ಒಂದು ವಿಶೇಷ ವೇತನ ಬಡ್ತಿ ನೀಡುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

570 (849) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರು/ಸಿಬ್ಬಂದಿಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ಕುಮಾರ್ ನಾಯಕ್ ವರದಿ ಅನ್ವಯ ನೀಡಿದ ಒಂದು ವಿಶೇಷ ವೇತನ ಬಡ್ತಿಯನ್ನು ನೀಡುವ ಕಾರ್ಯ ಯಾವ ಹಂತದಲ್ಲಿದೆ ;

(ಆ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರ/ಸಿಬ್ಬಂದಿಗಳಿಗೆ ಒಂದು ವಿಶೇಷ ವೇತನ ಬಡ್ತಿಯನ್ನು ನೀಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ; ಯಾವ ಕಾರಣಕ್ಕಾಗಿ ಈ ಕಾರ್ಯ ವಿಳಂಬವಾಗಿದೆ; ಇರುವ ಅಡೆತಡೆಗಳೇನು ;

(ಇ) ಯಾವ ಕಾಲಮಿತಿಯೊಳಗೆ ಈ ನೌಕರರಿಗೆ ಈ ಸೌಲಭ್ಯವನ್ನು ಒದಗಿಸಲಾಗುವುದು ; (ಸ್ಪಷ್ಟ ನಿಲುವಿನೊಂದಿಗೆ ವಿವರವನ್ನು ಒದಗಿಸುವುದು)

(ಈ) ಶಿಕ್ಷಣ ಇಲಾಖೆಯ ಶಿಕ್ಷಕರಿಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಡಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸೇವಾ ಸೌಲಭ್ಯಗಳು ಬೇರೆ ಬೇರೆ ಇವೆಯೇ ; ಇದ್ದಲ್ಲಿ, ಅವುಗಳ ವಿವರವನ್ನು ಸಂಪೂರ್ಣ ವಿವರದೊಂದಿಗೆ ಒದಗಿಸುವುದು ?